ಯಾತ್ರಿ ನಿವಾಸ ನಿರ್ಮಾಣ

125 (269) ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು) :– ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಹಿರೇಕೆರೂರು ತಾಲ್ಲೂಕಿನ ಪುಣ್ಯಕ್ಷೇತ್ರವಾಗಿರುವ ಗುಡ್ಡದ ಮಾದಾಪುರ ಗ್ರಾಮದ ಪ್ರಸಿದ್ಧ ಶ್ರೀ ಸಿದ್ದೇಶ್ವರ ದೇವಸ್ಥಾನದ ಆವರಣದಲ್ಲಿ ಯಾತ್ರಿ ನಿವಾಸ ನಿರ್ಮಾಣ ಮಾಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು):–

ಅ) ಈ ರೀತಿಯ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಆಂಗ್ಲ ಭಾಷಾ ಬೋಧಕರ ಹುದ್ದೆ ಭರ್ತಿ

127(271) ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದ ಯಾವ ಯಾವ ಸರ್ಕಾರಿ ಪ್ರೌಢಶಾಲೆಗಳಲ್ಲಿ ಆಂಗ್ಲ ಭಾಷಾ ಬೋಧಕರ ಹುದ್ದೆಗಳು ಮಂಜೂರಾಗಿರುವುದಿಲ್ಲ ;

ಆ) ಇದರಿಂದಾಗಿ ಪ್ರೌಢಶಾಲಾ ಮಕ್ಕಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಮಕ್ಕಳ ವಿದ್ಯಾಭ್ಯಾಸ ಹಿತದೃಷ್ಟಿಯಿಂದ ಸದರಿ ಹುದ್ದೆಗಳನ್ನು ಮಂಜೂರು ಮಾಡಿ ಕೂಡಲೇ ಶಿಕ್ಷಕರ ನೇಮಕಾತಿ ಮಾಡುವ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):–

ಅ) 2006–07ನೇ ಸಾಲಿನಲ್ಲಿ ಪ್ರಾರಂಭಿಸಲಾದ ಸರ್ಕಾರಿ ಪ್ರೌಢಶಾಲೆಗಳಲ್ಲಿ ನಿರ್ದಿಷ್ಟವಾಗಿ ಆಂಗ್ಲ ಭಾಷಾ ಸಹ ಶಿಕ್ಷಕರ ಹುದ್ದೆಗಳನ್ನು ಸೃಷ್ಟಿಸಿರುವುದು ಕಂಡುಬರುವುದಿಲ್ಲ. ಸರ್ಕಾರದ ಆದೇಶದ ಸಂಖ್ಯೆ : ಇಡಿ 143 ಯೋಯೋಕ 2007, ದಿನಾಂಕ : 09–05–2007ರಲ್ಲಿ ತಿಳಿಸಿದಂತೆ ಪ್ರೌಢಶಾಲೆಗಳಿಗೆ ಕೆಳಗಿನಂತೆ ಹುದ್ದೆಗಳನ್ನು ನಿಗದಿಮಾಡಲಾಗಿದೆ.

ಮುಖ್ಯ ಶಿಕ್ಷಕರು	–	01
ಸಹ ಶಿಕ್ಷಕರು	–	02
ಪಿ.ಸಿ.ಎಂ.	–	01
ಸಿ.ಬಿ.ಝಡ್.	–	01
ಭಾಷೆ	–	01
ದೈಹಿಕ ಶಿಕ್ಷಕರು	–	01 (ಗೇಡ್–1)
ವೃತ್ತಿ ಶಿಕ್ಷಕರು	–	01 (ವಿಶೇಷ ಶಿಕ್ಷಕರು)
ಒಟ್ಟು	–	**08**

ದಿನಾಂಕ : 30–01–2010ರ ಪತ್ರದಲ್ಲಿ ಇಂಗ್ಲೀಷ್ ಭಾಷಾ ಸಹ ಶಿಕ್ಷಕರನ್ನು ಮಂಜೂರು ಮಾಡಲು ಕೋರಲಾಗಿದೆ. ಸರ್ಕಾರದ ಸುತ್ತೋಲೆ ಸಂಖ್ಯೆ : ಇಡಿ 326 ಎಲ್‌ಬಿಪಿ 2010, ದಿನಾಂಕ : 04–12–2010ರ ಸುತ್ತೋಲೆಯಲ್ಲಿ ಯಾವ ಪ್ರೌಢಶಾಲೆಗಳಲ್ಲಿ ಆಂಗ್ಲ ಭಾಷಾ ಶಿಕ್ಷಕರ ಹುದ್ದೆ ಸೃಜಿಸಲಾಗಿಲ್ಲವೋ ಅಂಥಹ ಕಡೆಗಳಲ್ಲಿ ಒಂದಕ್ಕಿಂತ ಹೆಚ್ಚು ಕಲಾ ಶಿಕ್ಷಕರಿದ್ದಲ್ಲಿ ಆಂಗ್ಲ ಭಾಷಾ ಶಿಕ್ಷಕರೆಂದು ಗುರುತಿಸಲು ಆದೇಶಿಸಿದೆ. 2008–09ನೇ ಸಾಲಿನಿಂದ ಹೊಸ ಪ್ರೌಢಶಾಲೆಗಳಿಗೆ ಮಂಜೂರಾತಿ ನೀಡುವಾಗ 7 ಸಹ ಶಿಕ್ಷಕರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ. ಇದರಲ್ಲಿ ಆಂಗ್ಲ ಭಾಷೆಯು ಸೇರಿರುತ್ತದೆ; ಎಲ್ಲಾ ಸರ್ಕಾರಿ ಪ್ರೌಢಶಾಲೆಗಳಲ್ಲಿ ಆಂಗ್ಲ ಭಾಷೆಯನ್ನು ಶಿಕ್ಷಕರು ಬೋಧಿಸುತ್ತಿದ್ದಾರೆ.

ಆ) ಇಲ್ಲ.

ಇ) ಮಕ್ಕಳ ಹಿತದೃಷ್ಟಿಯಿಂದ ಹುದ್ದೆಗಳು ಖಾಲಿ ಇದ್ದಲ್ಲಿ ಅವುಗಳನ್ನು ವರ್ಗಾವಣೆ ಮತ್ತು ನೇಮಕಾತಿ ಮೂಲಕ ಭರ್ತಿ ಮಾಡಲಾಗುವುದು.

ಸರ್ಕಾರಿ ಪ್ರೌಢಶಾಲೆ ಪ್ರಾರಂಭ

128(272) ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿ 2014–15ನೇ ಸಾಲಿಗೆ ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;